# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 455 (566) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.02.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಆಯುಷ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳ ಸಂಖ್ಯೆ ಎಷ್ಟು; ಅವು ಯಾವುವು; (ಪಟ್ಟಿನೀಡುವುದು) | ರಾಜ್ಯದ ಆಯುಷ್ ಇಲಾಖೆಯಡಿ 7 ಸರ್ಕಾರಿ ಆಯುಷ್ ವೈದ್ಯಕೀಯ ಮಹಾವಿದ್ಯಾಲಯಗಳನ್ನು ಒಳಗೊಂಡಂತೆ ಜಿಲ್ಲಾ ಕೇಂದ್ರ ಸ್ಥಾನದಲ್ಲಿ 49, ತಾಲ್ಲೂಕು ಕೇಂದ್ರ ಸ್ಥಾನದಲ್ಲಿ 94 ಹಾಗೂ ಇತರೆ ಪ್ರದೇಶಗಳಲ್ಲಿ 18 ಸರ್ಕಾರಿ ಆಯುಷ್ ಆಸ್ಪತ್ರೆಗಳಿವೆ. ಆಸ್ಪತ್ರೆಗಳ ಪಟ್ಟಿಯನ್ನು **ಅನುಬಂಧ-1ರಲ್ಲಿ** ಒದಗಿಸಲಾಗಿದೆ. |
| ಆ) | ಸದರಿ ಆಸ್ಪತ್ರೆಗಳಿಗೆ ಮಂಜೂರಾಗಿರುವ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು) | ಆಯುಷ್ ಇಲಾಖೆಯ ಆಸ್ಪತ್ರೆಗಳಲ್ಲಿ ಮಂಜೂರಾಗಿರುವ, ಹಾಲಿ ಕಾರ್ಯ ನಿರ್ವಹಿಸುತ್ತಿರುವ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ವಿವರಗಳನ್ನು **ಅನುಬಂಧ-2ರಲ್ಲಿ** ಒದಗಿಸಲಾಗಿದೆ. |
| ಇ) | ರಾಜ್ಯದಲ್ಲಿ ಆಯುಷ್ ಇಲಾಖೆಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆಯುಷ್ ತಜ್ಞ ವೈದ್ಯರುಗಳಿಗೆ ಸಂಬಂಧಿಸಿದಂತೆ ನೇಮಕಾತಿ ಮತ್ತು ಸಿ & ಆರ್ ನಿಯಮಾವಳಿಗಳನ್ನು ರೂಪಿಸಿ ಜಾರಿಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಸಿ & ಆರ್ ನಿಯಮಾವಳಿ ಪ್ರತಿ ಒದಗಿಸುವುದು; | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯು ತಾತ್ಕಾಲಿಕ ಯೋಜನೆಯಾಗಿದ್ದು ಸದರಿ ಯೋಜನೆಯಡಿಯಲ್ಲಿ ತಜ್ಞ ವೈದ್ಯರ ಸೇವೆಯನ್ನು ಪಡೆಯಲಾಗುತ್ತಿದ್ದು, ಯೋಜನೆಯು ಅಸ್ತಿತ್ವದಲ್ಲಿರುವವರೆಗೂ ಮಾತ್ರ ಹುದ್ದೆಯು ಚಾಲ್ತಿಯಲಿರುತ್ತದೆ. ಆದ್ದರಿಂದ ತಜ್ಞ ವೈದ್ಯರುಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವ ಅವಶ್ಯಕತೆ ಇರುವುದಿಲ್ಲ. |
| ಈ) | ಇದುವರೆಗೂ ಆಯುಷ್ ತಜ್ಞ ವೈದ್ಯರುಗಳಿಗೆ ಸಂಬಂಧಿಸಿದಂತೆ ನೇಮಕಾತಿ ಮತ್ತು ಸಿ&ಆರ್ ನಿಯಮಾವಳಿಗಳನ್ನು ರೂಪಿಸದಿದ್ದಲ್ಲಿ ಅದಕ್ಕೆ ಇರುವ ಕಾರಣಗಳೇನು? | |

ಸಂಖ್ಯೆ: ಆಕುಕ 35 ಪಿಟಿಡಿ 2023

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು